# ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ,

4ನೇ ಬ್ಲಾಕ್, ಜಯನಗರ, ಬೆಂಗಳೂರು – 560 041

## Rajiv Gandhi University of Health Sciences, Karnataka

4th 'T' Block, Jayanagar, Bangalore – 560 041


No. RGU/Adm/AFF/Nursing/Seat Matrix/2020-21 24/11/2021

## ಸುತ್ತೋಲೆ

**ಇವರಿಗೆ**

ವಿಶ್ವವಿದ್ಯಾಲಯಕ್ಕೆ ಸಂಯೋಜನೆಗೊಂಡಿರುವ ಎಲ್ಲಾ
ನರ್ಸಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ,

**ಮಾನ್ಯರೆ,**

**ವಿಷಯ:** 2020–21 ನೇ ಸಾಲಿನ ಬಿ.ಎಸ್ಸಿ / ಪಿಬಿ ಬಿ.ಎಸ್ಸಿ / ಎಂ.ಎಸ್ಸಿ ನರ್ಸಿಂಗ್ ಕೋರ್ಸ್‌ಗಳಿಗೆ ಖಾಸಗಿ ನರ್ಸಿಂಗ್ ಕಾಲೇಜುಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸರ್ಕಾರಿ ಕೋಟಾದಡಿ ಹಂಚಿಕೆಯಾಗಿರುವ ವಿದ್ಯಾರ್ಥಿಗಳಿಗೆ ಕೆಲವು ಕಾಲೇಜಿನ ಆಡಳಿತ ಮಂಡಳಿಯವರು ಪ್ರವೇಶಾತಿಯನ್ನು ನಿರಾಕರಿಸಿರುವ ಬಗ್ಗೆ.

**ಉಲೇಖ:** ಸರ್ಕಾರದ ಅಧೀನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ ಇವರ ಪತ್ರದ ದಿನಾಂಕ: 06.04.2021

* * * * *

ಮೇಲ್ಕಂಡ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ, 2020–21 ನೇ ಸಾಲಿನ ಬಿ.ಎಸ್ಸಿ / ಪಿಬಿ ಬಿ.ಎಸ್ಸಿ / ಎಂ.ಎಸ್ಸಿ ನರ್ಸಿಂಗ್ ಕೋರ್ಸ್‌ಗಳಿಗೆ ಸರ್ಕಾರಿ ಕೋಟಾದಡಿ ಖಾಸಗಿ ನರ್ಸಿಂಗ್ ಕಾಲೇಜುಗಳಿಗೆ ಹಂಚಿಕೆಯಾಗಿರುವ ವಿದ್ಯಾರ್ಥಿಗಳಿಗೆ ಕೆಲವು ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಈ ಕೆಳಕಂಡ ಕಾರಣಗಳನ್ನು ನೀಡಿ ಪ್ರವೇಶಾತಿಯನ್ನು ನಿರಾಕರಿಸುತ್ತಿರುವುದು ಪ್ರಧಾನ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ಇಲಾಖೆ; ನಿರ್ದೇಶಕರು, ವೈದ್ಯಕೀಯ ನಿರ್ದೇಶನಾಲಯ; ಕುಲಸಚಿವರು, ರಾ.ಗಾ.ಆ.ವಿ.ವಿ ಹಾಗೂ ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ಇವರ ಗಮನಕ್ಕೆ ಬಂದಿರುತ್ತದೆ.

1. ಸರ್ಕಾರಿ ಕೋಟಾದಡಿ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಹೆಚ್ಚುವರಿ ಶುಲ್ಕವನ್ನು ಪಾವತಿಸುವಂತೆ ಬೇಡಿಕೆಯನ್ನು ಇಟ್ಟಿರುವುದು.
2. ಸರ್ಕಾರಿ ಕೋಟಾದಡಿ ಆಯ್ಕೆಯಾಗುವ ಪುರುಷ ವಿದ್ಯಾರ್ಥಿಗಳಿಗೆ ಪ್ರವೇಶಾತಿಯನ್ನು ನಿರಾಕರಿಸಿ ಹೆಣ್ಣು ಮಕ್ಕಳಿಗೆ ಮಾತ್ರ ಪ್ರವೇಶಾತಿಯನ್ನು ನೀಡುತ್ತೇವೆ ಎಂದು ತಾರತಮ್ಯ ಮಾಡುತ್ತಿರುವುದು ಗಮನಕ್ಕೆ ಬಂದಿರುತ್ತದೆ.
3. ಸರ್ಕಾರಿ ಕೋಟಾದಡಿ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ತಮ್ಮ ಸಂಸ್ಥೆಯಲ್ಲಿ ಸದರಿ ಸಾಲಿಗೆ ಯಾವುದೇ ಸೀಟ್‌ಗಳಿಲ್ಲವೆಂದು ಪ್ರವೇಶಾತಿ ನಿರಾಕರಿಸುತ್ತಿರುವುದು ಕಂಡುಬಂದಿರುತ್ತದೆ.

Cont.......

4. ಸರ್ಕಾರಿ ಕೋಟಾದಡಿ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಕಾಲೇಜಿನ ವಿದ್ಯಾರ್ಥಿನಿಲಯದಲ್ಲಿ ಕಡ್ಡಾಯವಾಗಿ ಪ್ರವೇಶ ಪಡೆಯುವಂತೆ ಒತ್ತಾಯಿಸುತ್ತಿರುವುದು ಕಂಡುಬಂದಿರುತ್ತದೆ.

ಮೇಲ್ಕಂಡ ಎಲ್ಲಾ ದೂರುಗಳು ಸರ್ಕಾರದ ಗಮನಕ್ಕೆ ಬಂದಿದ್ದು, ಗಂಭೀರವಾಗಿ ಪರಿಗಣಿಸಿರುತ್ತಾರೆ. ಆದ್ದರಿಂದ, 2021-22 ನೇ ಸಾಲಿಗೆ ಸರ್ಕಾರಿ ಕೋಟಾದಡಿ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಮೇಲೆ ತಿಳಿಸಿರುವ ಕಾರಣಗಳಿಂದ ಪ್ರವೇಶಾತಿಯನ್ನು ನಿರಾಕರಿಸಿದ್ದಲ್ಲಿ, ಸಂಬಂಧಪಟ್ಟ ನರ್ಸಿಂಗ್ ಕಾಲೇಜುಗಳಿಗೆ ಸದರಿ ಕೋರ್ಸ್‌ಗಳನ್ನು ಪ್ರಾರಂಭ ಮಾಡಲು ಸರ್ಕಾರದಿಂದ ಹೊರಡಿಸಿರುವ ಆದೇಶದಲ್ಲಿ ತಿಳಿಸಿರುವ ಷರತ್ತು ಹಾಗೂ ನಿಬಂಧನೆಗಳ ಪ್ರಕಾರ ಮತ್ತು ರಾಜೀವ್ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಅಧಿನಿಯಮ 48 ನೇ ಪ್ರಕಾರ ಸದರಿ ಸಂಸ್ಥೆಗೆ ನೀಡಲಾಗಿರುವ ಸಂಯೋಜನೆಯನ್ನು ಕಾನೂನಾತ್ಮಕವಾಗಿ ಹಿಂಪಡೆಯಲಾಗುತ್ತದೆ ಹಾಗೂ 2021-22ನೇ ಸಾಲಿಗೆ ಆಡಳಿತ ಮಂಡಳಿಯಿಂದ ಪ್ರವೇಶ ಪಡೆದ ವಿದ್ಯಾರ್ಥಿಗಳ ಪ್ರವೇಶ ಅನುಮೋದನೆಯನ್ನು ನಿರಾಕರಿಸಿ ಸದರಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದೆಂದು ಈ ಮೂಲಕ ತಮಗೆ ತಿಳಿಸಲಾಗಿದೆ.

**ಕುಲಸಚಿವರು**
**ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ**
**ವಿಶ್ವವಿದ್ಯಾಲಯ, ಬೆಂಗಳೂರು**

ಪ್ರತಿಗಳು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, (ವೈದ್ಯಕೀಯ ಶಿಕ್ಷಣ), ಬಹುಮಹಡಿ ಕಟ್ಟಡ, ಬೆಂಗಳೂರು – 560 001.
2. ನಿರ್ದೇಶಕರು, ವೈದ್ಯಕೀಯ ನಿರ್ದೇಶನಾಲಯ, ಆನಂದ ರಾವ್ ವೃತ್ತ, ಬೆಂಗಳೂರು.
3. ಕಾರ್ಯನಿರ್ವಹಣಾಧಿಕಾರಿಗಳು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಮಲ್ಲೇಶ್ವರಂ, ಬೆಂಗಳೂರು.
4. ಆಪ್ತ ಸಹಾಯಕರು, ಮಾನ್ಯ ಕುಲಪತಿಗಳು/ ಕುಲಸಚಿವರು, ರಾ.ಗಾ.ಆ.ವಿ.ವಿ, ಬೆಂಗಳೂರು.
5. ಸಿಸ್ಟಮ್ ಅನಾಲಿಸ್ಟ್, ವೆಬ್ ಸರ್ವರ್ ವಿಭಾಗ, ರಾ.ಗಾ.ಆ.ವಿ.ವಿ, ಬೆಂಗಳೂರು (ವಿಶ್ವವಿದ್ಯಾಲಯದ ಜಾಲತಾಣದಲ್ಲಿ ಪ್ರಕಟಿಸಲು).
6. ಕಛೇರಿ ಪ್ರತಿ.